## ಕರ್ನಾಟಕ ವಿಧಾನ ಪರಿಷತ್ತು.

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 704 |
| ಸದಸ್ಯರ ಹೆಸರು | : | ಶ್ರೀ ದಿನೇಶ್ ಗೂಳಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 22.02.2022 |
| ಉತ್ತರಿಸಬೇಕಾದ ಸಚಿವರು | : | ನಗರಾಭಿವೃದ್ಧಿ ಸಚಿವರು. |

********

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದಿಂದ ಕಳೆದ ಮೂರು ವರ್ಷಗಳಿಂದ ಕೈಗೊಂಡಿರುವ ಯೋಜನೆ ಹಾಗೂ ಕಾಮಗಾರಿಗಳು ಯಾವುವು; | ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಕಳೆದ ಮೂರು ವರ್ಷಗಳಿಂದ ಕೈಗೊಂಡಿರುವ ಯೋಜನೆ ಹಾಗೂ ಕಾಮಗಾರಿಗಳ ವಿವರ ಈ ಕೆಳಗಿನಂತಿದೆ.<br>1. ವಿವೇಕಾನಂದ ನಗರ ಬಡಾವಣೆ ಹಾಗೂ ಸಾತನೂರು ಬಡಾವಣೆಯಲ್ಲಿ ಜಂಗಲ್ ಕ್ಲೀನಿಂಗ್.<br>2. ವಿವೇಕಾನಂದ ನಗರ ಬಡಾವಣೆಯಲ್ಲಿ ರಸ್ತೆ ನಿರ್ವಹಣೆ ಕಾಮಗಾರಿ, ಬೀದಿ ದೀಪಗಳ ನಿರ್ವಹಣೆ.<br>3. ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರ ಕಚೇರಿಯ ದುರಸ್ಥಿ ನಿರ್ವಹಣೆ. |
| ಆ | ಅಮೃತ ಅಭಿಯಾನ ಯೋಜನೆಯಡಿ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ನಡೆಸಲಾಗಿದೆ; | ಕೇಂದ್ರ ಸರ್ಕಾರದ AMRUT ಅಭಿಯಾನ ಯೋಜನೆಯಡಿಯಲ್ಲಿ "Formulation of GIS based Master Plan for 26 AMRUT cities" ಸುಧಾರಣೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯನ್ನು Nodal agency ಯನ್ನಾಗಿ ನೇಮಿಸಲಾಗಿರುತ್ತದೆ. ಸದರಿ ಯೋಜನೆಯಡಿಯಲ್ಲಿ ಮಂಡ್ಯ ನಗರಕ್ಕೆ GIS based ಮಹಾಯೋಜನೆ ತಯಾರಿಸಲು ಮೇ\|\| DDF Consultants, New Delhi ಸಂಸ್ಥೆಗೆ ಹೊರಗುತ್ತಿಗೆ ನೀಡಲಾಗಿದ್ದು, ಮಹಾಯೋಜನೆ ತಯಾರಿಕೆಯ ಕಾರ್ಯ ಪ್ರಗತಿಯಲ್ಲಿರುತ್ತದೆ. |
| ಇ | ಮಂಡ್ಯ ನಗರದಲ್ಲಿ ಪ್ರಾಧಿಕಾರದ ಹೊಸ ಬಡಾವಣೆ ನಿರ್ಮಾಣ ಮಾಡಲು ಯಾವುದಾದರೂ ಕ್ರಮ ಕೈಗೊಂಡಿರುವುದೆ; (ವಿವರ ನೀಡುವುದು) | ಮಂಡ್ಯ ನಗರದಲ್ಲಿ ಪ್ರಾಧಿಕಾರದ ವತಿಯಿಂದ ಯಾವುದೇ ಹೊಸ ಬಡಾವಣೆಯನ್ನು ನಿರ್ಮಿಸಲು ಕ್ರಮವನ್ನು ಕೈಗೊಂಡಿರುವುದಿಲ್ಲ. |
| ಈ | ಪ್ರಾಧಿಕಾರದಿಂದ 2021-22ನೇ ಸಾಲಿನಲ್ಲಿ ಕೈಗೊಂಡಿರುವ ಒಳಚರಂಡಿ ಕಾಮಗಾರಿಗಳಿಗೆ ಯಾವ್ಯಾವ ಅನುದಾನವನ್ನು ಬಳಸಲಾಗಿದೆ; ಕಾಮಗಾರಿಗಳು ಎಂದು ಪ್ರಾರಂಭಗೊಂಡಿವೆ ಮತ್ತು ಎಂದು ಪೂರ್ಣಗೊಳ್ಳಲಿದೆ ಹಾಗೂ ಈ ಕಾಮಗಾರಿಯ ಗುತ್ತಿಗೆದಾರರು ಯಾರು? | ಸರ್ಕಾರದ ಆದೇಶ ಸಂಖ್ಯೆ: ನಅಇ/370/ಮೈಅಪ್ರಾ/2016 ದಿನಾಂಕ: 23.09.2020 ರಲ್ಲಿ ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರವು ಅಭಿವೃದ್ಧಿಪಡಿಸಿರುವ ವಿವೇಕಾನಂದ ನಗರ ಬಡಾವಣೆಗೆ ಕುಡಿಯುವ ನೀರು ಸರಬರಾಜು ಹಾಗೂ ಒಳಚರಂಡಿ ಕಲ್ಪಿಸುವ ಒಟ್ಟು ರೂ.16.46 ಕೋಟಿಗಳ ಅಂದಾಜು ಪಟ್ಟಿಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ. |

| | | |
|---|---|---|
| | | ಇದರಲ್ಲಿ ಕ್ರಮವಾಗಿ ಕುಡಿಯುವ ನೀರು ಸರಬರಾಜು ವ್ಯವಸ್ಥೆ ಕಲ್ಪಿಸುವ ಕಾಮಗಾರಿಗೆ ರೂ. 4.57 ಕೋಟಿ ಹಾಗೂ ಒಳಚರಂಡಿ ಕಾಮಗಾರಿಗೆ ರೂ.11.89 ಕೋಟಿಗಳ ಕಾಮಗಾರಿಯನ್ನು ಠೇವಣಿ ಕೊಡುಗೆ ಆಧಾರ ಮೇಲೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಮಂಡ್ಯ ವಿಭಾಗದ ವತಿಯಿಂದ ಕೈಗೊಳ್ಳಲು ವಹಿಸಲಾಗಿರುತ್ತದೆ. ದಿನಾಂಕ: 26-06-2021ರ ವರೆಗೆ ರೂ.8.23 ಕೋಟಿಗಳನ್ನು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ಠೇವಣಿಕರಿಸಲಾಗಿದೆ. ಮುಖ್ಯ ಅಭಿಯಂತರರು, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮೈಸೂರು ರವರು ದಿನಾಂಕ:13.09.2021 ರಲ್ಲಿ ಸದರಿ ಕಾಮಗಾರಿಗಳಿಗೆ ತಾಂತ್ರಿಕ ಮಂಜೂರಾತಿಯನ್ನು ನೀಡಿರುತ್ತಾರೆ ಮತ್ತು ಮುಖ್ಯ ಅಭಿಯಂತರರು ದಿನಾಂಕ:01-10-2021 ರಲ್ಲಿ ಟೆಂಡರ್ ಆಹ್ವಾನಿಸಿದ್ದು, ದಿನಾಂಕ:01-01-2022 ರಂದು ಆರ್ಥಿಕ ಬಿಡ್‌ನ್ನು ತೆರೆಯಲಾಗಿದ್ದು, ಟೆಂಡರ್ ಮೌಲ್ಯಮಾಪನ ಪ್ರಗತಿಯಲ್ಲಿರುತ್ತದೆ. ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡ ನಂತರ ಗುತ್ತಿಗೆದಾರರನ್ನು ನೇಮಿಸಿ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು. |

ಸಂಖ್ಯೆ: ನಅಇ 68 ಮೈಅಪ್ರಾ 2022 (ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು